**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ.ಎಂ.ಜಿ.ಮುಳೆ ಇವರ ನಿಯಮ 330 ರಡಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ ಒದಗಿಸುವ ಬಗ್ಗೆ.**

**ವಿಷಯ:** ಕಲ್ಯಾಣ ಕರ್ನಾಟಕದ ಕಲಬುರ್ಗಿಯಲ್ಲಿ ನಡೆದ ಸಚಿವ ಸಂಪುಟದಲ್ಲಿ 46 ವಿಷಯಗಳು ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಸಂಬಂಧಿಸಿದರೂ ಕೂಡ ಸದರಿ ನಿರ್ಣಯಗಳು ಇನ್ನೂ ಜಾರಿಯಾಗದಿರುವುದರಿಂದ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ಕುಂಠಿತಗೊಂಡಿರುವ ಬಗ್ಗೆ.

******

**ಉತ್ತರ:-**

ದಿನಾಂಕ:17.09.2024ರಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಗೆ ಸಂಬಂಧಿಸಿದ 3 ಅಂಶಗಳ ಬಗ್ಗೆ ನಿರ್ಣಯವಾಗಿರುತ್ತದೆ. ಸದರಿ ನಿರ್ಣಯಗಳಿಗೆ ಯೋಜನಾ ಇಲಾಖೆಯು ಕೈಗೊಂಡಿರುವ ಕ್ರಮದ ವಿವರ ಈ ಕೆಳಗಿನಂತಿರುತ್ತದೆ.

| ಕ್ರ. ಸಂ | ಸಭೆಯ ದಿನಾಂಕ | ವಿಷಯ ಸಂಖ್ಯೆ | ವಿಷಯ | ಅನುಪಾಲನ ವರದಿ |
|---|---|---|---|---|
| 1 | 17.09.2024 | ಸಿ.537/2024 | ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ರೂ.5000 ಕೋಟಿಗಳ ವಿಶೇಷ ಅನುದಾನವನ್ನು ನೀಡಲು ಕೇಂದ್ರ ಸರ್ಕಾರವನ್ನು ಕೋರುವ ಬಗ್ಗೆ. | ಕಲ್ಯಾಣ ಕರ್ನಾಟಕ ಭಾಗದ ಸರ್ವಾಗೀಣ ಅಭಿವೃದ್ಧಿಗಾಗಿ ರೂ.5000.00 ಕೋಟಿಗಳನ್ನು ನೀಡುವಂತೆ ಕೇಂದ್ರ ಸರ್ಕಾರವನ್ನು ಕೋರಲು ವಿಸ್ತೃತ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವಂತೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಪತ್ರ ಬರೆಯಲಾಗಿದೆ, ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ. |
| 2 | 17.09.2024 | ಸಿ.537/2024 | ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮೇಲುಸ್ತುವಾರಿ ಮಾಡಲು ಒಂದು ಪ್ರತ್ಯೇಕ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯವನ್ನುಸ್ಥಾಪಿಸುವ ಬಗ್ಗೆ | ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿಗಾಗಿ ಕೆಲಸಗಳನ್ನು ಇನ್ನೂ ಹೆಚ್ಚಿನ ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಮೇಲುಸ್ತುವಾರಿ ಮಾಡಲು ಒಂದು ಪ್ರತ್ಯೇಕ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಸಚಿವಾಲಯವನ್ನು ಸೃಜಿಸುವ ಕುರಿತು ಮುಂದಿನ ಕ್ರಮಕ್ಕಾಗಿ ಯೋಜನಾ ಇಲಾಖೆಯ ಕಡತ |

| | | | | |
|---|---|---|---|---|
| | | | | ಸಂಖ್ಯೆ: ಪಿಡಿಎಸ್ 118 ಹೆಚ್ ಕೆಡಿ 2024ರಲ್ಲಿ ಪ್ರಸ್ತಾವನೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಸಲ್ಲಿಸಲಾಗಿದೆ. |
| 3 | 17.09.2024 | ಸಿ.537/2024 | ಸಂವಿಧಾನ ಅನುಚ್ಛೇದ 371(ಜೆ) ರನ್ವಯ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ | ಸಂವಿಧಾನ ಅನುಚ್ಛೇದ 371(ಜೆ) ರನ್ವಯ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಅನಧಿಕೃತ ಟಿಪ್ಪಣಿ ಸಂಖ್ಯೆ: ಪಿಡಿಎಸ್ 101 ಹೆಚ್ ಕೆಡಿ 2023 ದಿ:08.10.2024 ರಲ್ಲಿ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳನ್ನು ಕೋರಲಾಗಿದೆ. |

ಯೋಜನಾ ಇಲಾಖೆಗೆ ಸಂಬಂಧಿಸಿದ ಸಚಿವ ಸಂಪುಟದ ನಿರ್ಣಯಗಳನ್ನು ಅನುಬಂಧ 1ರಲ್ಲಿ ನೀಡಲಾಗಿದೆ ಮತ್ತು ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ ಎಂಬ ಅಂಶವನ್ನು ಮಾನ್ಯ ಸದಸ್ಯರ ಅವಗಾಹನೆಗೆ ತರಬಯಸುತ್ತೇನೆ.

ಸಂಖ್ಯೆ: ಪಿಡಿಎಸ್ 152 ಹೆಚ್‌ಕೆಡಿ 2024

**(ಡಿ.ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ ಸಚಿವರು.